O.S. No.95/2022 -PW-1

ದಿಃ 17-02-2024 ರಂದು ಸಾಕ್ಷಿಗೆ ಪ್ರಮಾಣ ವಚನ ಬೋಧಿಸಿ ಮುಖ್ಯ ವಿಚಾರಣೆಗೆ ಒಳಪಡಿಸಲಾಯಿತು.

**ಮುಖ್ಯ ವಿಚಾರಣೆಃ** ವಾದಿ ಪರವಾಗಿ ಶ್ರೀ ಬಿ ಎನ್ ಪಿ ವಕೀಲರಿಂದ.

ನಾನು ವಾದಿಯಾಗಿದ್ದು ಇಂದು ನಾನು ಮಾನ್ಯ ನ್ಯಾಯಾಲಯಕ್ಕೆ ನನ್ನ ಮುಖ್ಯ ವಿಚಾರಣೆ ಬದಲಿಗೆ ಪ್ರಮಾಣ ಪತ್ರವನ್ನು ಸಲ್ಲಿಸಿರುತ್ತೆನೆ. ಅದರಲ್ಲಿ ಬರೆದಿರುವ ಎಲ್ಲ ಅಂಶಗಳು ಸತ್ಯವಾಗಿರುತ್ತವೆ ಮತ್ತು ಸದ್ರಿ ಅಂಶಗಳನ್ನು ಓದಿ ತಿಳಿದುಕೊಂಡು ಸಹಿ ಮಾಡಿರುತ್ತೇನೆ.

ಇಂದು ನಾನು ಮಾನ್ಯ ನ್ಯಾಯಲಯಕ್ಕೆ ದಿನಾಂಕ 19-12-2021 ರಂದು ಜಿಲ್ಲಾಧಿಕಾರಿ ಉತ್ತರ ಕನ್ನಡ ರವರಿಗೆ ಕಳಹಿಸಿದ ನೊಟೀಸಿನ ಕಚೇರಿ ಪ್ರತಿಯನ್ನು ಹಾಜರುಪಡಿಸಿದ್ದು ಅದನ್ನು ನಿಪಿ 1 ಎಂದು, ನಿಪಿ 1 ಕ್ಕೆ ಸಂಬಂಧಿಸಿದ ಅಂಚೆ ರಸೀದಿಯನ್ನು ಹಾಜರುಪಡಿಸಿದ್ದು ಅದನ್ನು ನಿಪಿ 2 ಎಂದು, ದಿನಾಂಕ 10-01-2022 ರಂದು ಜಿಲ್ಲಾಧಿಕಾರಿ, ಉತ್ತರ ಕನ್ನಡದವರು 2 ನೇ ಪ್ರತಿವಾದಿಗೆ ಕಳುಹಿಸಿದ ಪತ್ರದ ಪ್ರತಿಯನ್ನು ಹಾಜರುಪಡಿಸಿದ್ದು ಅದನ್ನು ನಿಪಿ 3 ಎಂದು, ಎಮ್ ಇ ನಂಬರ 143 ಮತ್ತು 486 ರ ದೃಢಿಕೃತ ನಕಲನ್ನು ಹಾಜರುಪಡಿಸಿದ್ದು ಅವುಗಳನ್ನು ಒಟ್ಟಾರೆಯಾಗಿ ನಿಪಿ 4 ಎಂದು ಗುರುತಿಸಲಾಯಿತು.

ಮುಂದುವರೆದ ಮುಖ್ಯ ವಿಚಾರಣೆಗೆ ಸಮಯ ಕೋರಿದ್ದು ಮುಂದೂಡಲಾಯಿತು.

(ತೆರೆದ ನ್ಯಾಯಾಲಯದಲ್ಲಿ ನನ್ನ ಉಕ್ತಲೇಖನದಂತೆ ಗಣಕಯಂತ್ರದ ಮೇಲೆ ಗಣಕೀಕರಿಸಿದೆ)

ಓ.ಹೆ.ಕೇ. ಸರಿ ಅದೆ.

ದಿವಾಣಿ ನ್ಯಾಯಾಧೀಶರು ಹಾಗೂ
ಪ್ರ.ದ.ನ್ಯಾದಂ., ಹಳಿಯಾಳ.